ಸೋಮವಾರ 11.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 21 Digital Varthe Kannada Daily Volume 01 - Issue 21 Monday 11.08.2025 Price: 5/- Rs 2 Pages Bangalore Rural

DIGITAL VARTHE

www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## ಮೆಟ್ರೋ ಯೋಜನೆಗೆ ರಾಜ್ಯ ಸರ್ಕಾರ ಶೇ. 87.37 ರಷ್ಟು ಹಣ ನೀಡುತ್ತಿದೆ: ಸಿ.ಎಂ

### ಕೇಂದ್ರ ಸರ್ಕಾರದ ಪಾಲು ಶೇ12.63 ರಷ್ಟು ಮಾತ್ರ, ಕೇಂದ್ರ ಸರ್ಕಾರ ಕೊಟ್ಟಿರುವುದು

ಬೆಂಗಳೂರು: ಮೆಟ್ರೋ ಯೋಜನೆಗೆ ರಾಜ್ಯ ಸರ್ಕಾರ ಶೇ. 87.37 ರಷ್ಟು ಹಣ ನೀಡುತ್ತಿದ್ದು ಕೇಂದ್ರ ಸರ್ಕಾರದ ಪಾಲು ಕೇವಲ ಶೇ12.63 ರಷ್ಟಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿವರಿಸಿದರು. ಮೆಟ್ರೋ ಯೋಜನೆಯ 2ನೇ ಹಂತದ ಹಳದಿ ಮಾರ್ಗದ ಉದ್ಘಾಟನೆ ಹಾಗೂ ಜೆ.ಪಿ.ನಗರ 4ನೇ ಹಂತದ ಶಂಕುಸ್ಥಾಪನೆ ನೆರವೇರಿಸಿ ಹಾಗೂ ವಂದೇ ಭಾರತ್ ರೈಲುಗಳಿಗೆ ಚಾಲನೆ ನೀಡಿದ ಬಳಿಕ ಮಾತನಾಡಿದರು. ಕೇಂದ್ರ ಸರ್ಕಾರದ ಸಹಭಾಗಿತ್ವವೂ ಸಹ ಬೆಂಗಳೂರು ಮೆಟ್ರೋ ಯೋಜನೆಯ ಅನುಷ್ಠಾನಕ್ಕೆ ಕಾರಣವಾಗಿದೆ.

ಮೆಟ್ರೋ ಯೋಜನೆಗೆ ಕೇಂದ್ರ ಸರ್ಕಾರ ಹಣಕಾಸು ಮತ್ತು ತಾಂತ್ರಿಕ ನೆರವು ಒದಗಿಸುತ್ತಿದೆ. ರಾಜ್ಯ ಸರ್ಕಾರ ಮೆಟ್ರೋ ಯೋಜನೆ ಹಂತ 1,2 ಮತ್ತು 2ಎ, 2ಬಿ ಮತ್ತು ಹಂತ 3 ಅನುಷ್ಠಾನಕ್ಕೆ ತನ್ನ ಪಾಲಿನ ರೂ. 25,387 ಕೋಟಿ ಒದಗಿಸಿದ್ದು, ಇದರೊಂದಿಗೆ ಹೆಚ್ಚುವರಿ ಹಣಕಾಸು ನೆರವಿನ ರೂಪದಲ್ಲಿ ಸಾಲ ಮರುಪಾವತಿಗಾಗಿ ರೂ.3,987 ಕೋಟಿ ಒದಗಿಸಿದೆ. ಮೆಟ್ರೋ ಯೋಜನೆಗಳಿಗಾಗಿ ಇದುವರೆಗೂ 59139 ಕೋಟಿ ರೂ ಅನುದಾನವನ್ನು ವಿನಿಯೋಗಿಸಲಾಗಿದೆ. ರಾಜ್ಯ ಸರ್ಕಾರದ ಜವಾಬ್ದಾರಿ ಶೇ. 87.37 ರಷ್ಟಿದೆ. ಕೇಂದ್ರ ಸರ್ಕಾರವು ತನ್ನ ಖಜಾನೆಯಿಂದ ಕೊಟ್ಟಿರುವುದು ಶೇ. 12.63 ರಷ್ಟು, ಕೇಂದ್ರ ಸರ್ಕಾರ ಒದಗಿಸಿರುವುದು 7468.86 ಕೋಟಿ ರೂಗಳು ಮಾತ್ರ




ಎಂದರು.

ಕರ್ನಾಟಕ ಸರ್ಕಾರ ಮತ್ತು ಕೇಂದ್ರ ಸರ್ಕಾಗಳು ಶೇ.50;50 ಅನುಪಾತದಲ್ಲಿ ಹೂಡಿಕೆ ಮಾಡಬೇಕೆಂದು ಒಪ್ಪಂದವಾಗಿದೆ. ಆದರೆ ಕೇಂದ್ರ ಸರ್ಕಾರದಿಂದ ಈಕ್ವಿಟಿಯ ಹೊರತಾಗಿ ಸಾಲದ ರೂಪದಲ್ಲಿ ಬಂದ ಹಣವನ್ನು ಬಡ್ಡಿ ಸಮೇತ ರಾಜ್ಯ ಸಕಾರ ಹಾಗೂ ಮೆಟ್ರೋ ಸಂಸ್ಥೆಗಳು ತೀರಿಸಬೇಕಾಗಿದೆ ಎಂದರು. ಇದರಿಂದ ರಾಜ್ಯದ ಮೇಲೆ, ನಮ್ಮ ಮೇಲೆ ಶೇ.87.37 ರಷ್ಟು ಭಾರವಿದೆ ಎಂದು ಮಾನ್ಯ ಪ್ರಧಾನಮಂತ್ರಿಗಳಿಗೆ ಮನವರಿಕೆ ಮಾಡಿಸಬಯಸುತ್ತೇನೆ ಎಂದರು.

ಸಂಪರ್ಕ ವ್ಯವಸ್ಥೆಯನ್ನು ಸುಧಾರಿಸಿ ಬೆಂಗಳೂರು ನಗರವನ್ನು ಜಾಗತಿಕ ಆಕರ್ಷಣೆಯ ನಗರವಾಗಿಸುವ ನಿಟ್ಟಿನಲ್ಲಿ ನಮ್ಮದು ಪ್ರಮುಖ ಹೆಜ್ಜೆಯಾಗಿದ್ದು, ನಮಗೆಲ್ಲರಿಗೂ ಹೆಮ್ಮೆಯ ದಿನವಾಗಿದೆ. ಮೆಟ್ರೊ ಹಳದಿ ಮಾರ್ಗದ ಉದ್ಘಾಟನೆಯಿಂದ ಬೆಂಗಳೂರು ಮೆಟ್ರೋ ಒಟ್ಟು 96.10 ಕಿ.ಮೀ ಕಾರ್ಯಾಚರಣೆಯೊಂದಿಗೆ ದಕ್ಷಿಣ ಭಾರತದಲ್ಲಿಯೇ ಅತಿ ಉದ್ದದ ಮೆಟ್ರೊ ಜಾಲದ ಗೌರವಕ್ಕೆ ಪಾತ್ರವಾಗಿದೆ. ಇದು ಪ್ರತಿಯೊಬ್ಬ ಕನ್ನಡಿಗನಿಗೆ ಹೆಮ್ಮೆಯ ಕ್ಷಣವಾಗಿದ್ದು, ಅಭಿವೃದ್ಧಿಯ ಕಡೆಗಿನ ನಮ್ಮ ಬದ್ಧತೆಗೆ ಸಾಕ್ಷಿಯಾಗಿದೆ. ಬೆಂಗಳೂರಿನ ಬೆಳವಣಿಗೆ ಮತ್ತು ರಾಷ್ಟ್ರದ ಅಭಿವೃದ್ಧಿಯ ದೃಷ್ಟಿಯಿಂದ ನಮ್ಮ ಮೆಟ್ರೋಗೆ ಹೆಚ್ಚಿನ ಅನುದಾನಗಳನ್ನು ಒದಗಿಸಬೇಕೆಂದು ವಿನಂತಿಸುತ್ತೇನೆ ಎಂದರು. ನಾಗರಿಕರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪರಸ್ಪರ ಸಹಕಾರ, ಒಕ್ಕೂಟ ವ್ಯವಸ್ಥೆಯ ಬುನಾದಿಯನ್ನು ಇನ್ನಷ್ಟು ಬಲಪಡಿಸುವ ವಿಶ್ವಾಸ ನನಗಿದೆ ಎಂದರು.

ಇಂದು ಲೋಕಾರ್ಪಣೆಗೊಂಡಿರುವ ರೂ.7,160 ಕೋಟಿ ವೆಚ್ಚದ ಹಳದಿ ಲೇನ್ ಬೆಂಗಳೂರಿನ ಪ್ರಮುಖ ಐಟಿ ಮತ್ತು ತಂತ್ರಜ್ಞಾನ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾವಿರಾರು ವೃತ್ತಿಪರರಿಗೆ, ಉದ್ಯೋಗಿಗಳಿಗೆ, ವಿದ್ಯಾರ್ಥಿಗಳಿಗೆ ಸುರಕ್ಷಿತ ಮತ್ತು ತ್ವರಿತ ಪ್ರಯಾಣವನ್ನು ಖಾತ್ರಿಪಡಿಸುತ್ತದೆ. ಪ್ರತಿನಿತ್ಯ ಸುಮಾರು 3.5 ಲಕ್ಷ ಪ್ರಯಾಣಿಕರು ಹಳದಿ ಲೇನ್ ಬಳಸುವ ನಿರೀಕ್ಷೆಯಿದೆ. ಇದರಿಂದ ಮುಖ್ಯವಾಗಿ ಸೆಂಟ್ರಲ್ ಸಿಲ್ಕ್ ಬೋರ್ಡ್ ಮತ್ತು ಜಯದೇವ ಆಸ್ಪತ್ರೆ ಸುತ್ತಲಿನ ಭಾರೀ ಟ್ರಾಫಿಕ್ ಸಮಸ್ಯೆ ಸುಧಾರಿಸುವ ವಿಶ್ವಾಸ ಹೊಂದಿದ್ದೇವೆ ಎಂದರು.

ಇಂದು ಉದ್ಘಾಟನೆಗೊಂಡಿರುವ ಈ ಹಳದಿ ಲೇನ್ ಪ್ರಮುಖ ಬಯೋಟೆಕ್ ಮತ್ತು ಐಟಿ ಹಬ್ಗಳನ್ನು ಪರಸ್ಪರ ಜೋಡಿಸುತ್ತದೆ ಮಾತ್ರವಲ್ಲದೆ ಹಲವು ಪ್ರಮುಖ ಆಸ್ಪತ್ರೆಗಳು ಮತ್ತು ಕೈಗಾರಿಕಾ ವಲಯಗಳಿಗೂ ಸುಲಭದ ಸಂಪರ್ಕ ಸಾಧ್ಯವಾಗಿಸಿದೆ. ರಾಗಿಗುಡ್ಡದಿಂದ ಸೆಂಟ್ರಲ್ ಸಿಲ್ಕ್ ಬೋರ್ಡ್ ವರೆಗೆ ರಾಜ್ಯ ಸರ್ಕಾರದ ಅನುದಾನದಲ್ಲಿ ನಿರ್ಮಿಸಲಾಗಿರುವ ಡಬಲ್ ಡೆಕ್ಕರ್ ಫ್ಲೈಓವರ್, ಬೆಂಗಳೂರಿನ ಅತ್ಯಂತ ನಿಬಿಡ ಜಂಕ್ಷನ್ಗಳಲ್ಲಿನ ಸಂಚಾರ ವ್ಯವಸ್ಥೆಯನ್ನು ಸುಧಾರಿಸಲಿದೆ. ಬೆಂಗಳೂರಿನ ಟ್ರಾಫಿಕ್ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿದೆ ಎಂಬುವುದಕ್ಕೆ ಇದು ನಿದರ್ಶನವಾಗಿದೆ.

ಹೆಚ್ಚುತ್ತಿರುವ ನಗರೀಕರಣ ಮತ್ತು ಜನಸಂಖ್ಯೆ ನಗರದ ರಸ್ತೆಗಳ ಮೇಲೆ ವಿಪರೀತ ಒತ್ತಡವನ್ನು ಹೇರುತ್ತಿದೆ. ಪ್ರತಿದಿನ ಸುಮಾರು 9 ಲಕ್ಷ ಪ್ರಯಾಣಿಕರು ಬೆಂಗಳೂರು ಮೆಟ್ರೋ ಸೇವೆ ಬಳಸುತ್ತಿದ್ದಾರೆ. ಹಳದಿ ಲೇನ್ ಸೇರ್ಪಡೆಯಿಂದ ಪ್ರಯಾಣಿಕರ ಸಂಖ್ಯೆ 12.5 ಲಕ್ಷ ದಾಟುವ ನಿರೀಕ್ಷೆ ಹೊಂದಲಾಗಿದೆ. ಬೆಂಗಳೂರು ಮೆಟ್ರೋ ಹಾದಿಯಲ್ಲಿ ನಾವು ಸಾಗಬೇಕಾದ ದೂರ ಇನ್ನೂ ಬಹಳಷ್ಟಿದೆ. ಎರಡನೇ ಹಂತದ ಮಾರ್ಗದ ಕಾರ್ಯಾಚರಣೆಯೊಂದಿಗೆ, ನಾವು 117 ಕಿ.ಮೀ ಮೆಟ್ರೋ ಸಂಪರ್ಕ ಸಾಧಿಸಲಿದ್ದೇವೆ. ಇದರಿಂದ 15 ಲಕ್ಷ ಮಂದಿ ಮೆಟ್ರೋದಲ್ಲಿ ಪ್ರಯಾಣಿಸಲು ಅವಕಾಶವಾಗಲಿದೆ.

ಪುಟ 2ಕ್ಕೆ.....

## ಮಾನವತಾವಾದವನ್ನು ಸಾರಿದ ಧರ್ಮ ಬೌದ್ಧ ಧರ್ಮ: ಸಚಿವ ಮುನಿಯಪ್ಪ



### ಅನುಭವ ಮಂಟಪದ ರೀತಿಯಲ್ಲಿ ಇವತ್ತು ನಮ್ಮ ಪಾರ್ಲಿಮೆಂಟ್ ನಡೆಯುತ್ತಿದೆ.

ಚಿತ್ರದುರ್ಗ: ಅನುಭವ ಮಂಟಪ ಮುರಘಾ ಮಠದಲ್ಲಿಂದು ಭವ್ಯವಾಗಿ ನಡೆದ ' ಬಸವೇಶ್ವರರ ನಾಡಿನಲ್ಲಿ ಬುದ್ಧ ಸ್ಮರಣೆ' ಮಹೋತ್ಸವದಲ್ಲಿ ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆ.ಹೆಚ್. ಮುನಿಯಪ್ಪ ರವರು ಭಾಗವಹಿಸಿ ಬುದ್ಧ-ಬಸವ ಮೂರ್ತಿಗೆ ಪುಷ್ಪಾರ್ಚನೆ ಹಾಗೂ ಮಾಲಾರ್ಪಣೆ ನೆರವೇರಿಸಿದರು. ನಂತರ ಮಾತನಾಡಿದ ಸಚಿವರು ಬಸವೇಶ್ವರ ನಾಡಿನಲ್ಲಿ ಬುದ್ಧ ಸ್ಮರಣೆ ಮತ್ತು ದಲೈ ಲಾಮಾ ಅವರ 90ನೇ ಜನ್ಮದಿನಾಚರಣೆ ಹಿನ್ನಲೆಯಲ್ಲಿ ಈ ಕಾರ್ಯಕ್ರಮ ಆಯೋಜಿಸಿರುವುದು ಬಹಳಸಂತೋಷಕರವಾಗಿದೆ ಎಂದರು.

ಬೌದ್ಧ ಧರ್ಮ ಬಹಳ ಹಳೆಯ ಧರ್ಮ ಈ ಧರ್ಮದ ನಾಲ್ಕು-ಐದನೇ ಶತಮಾನದ ಪುರಾವೆಗಳು ಇಂದು ನಾನು ಪ್ರತಿನಿಧಿಸುವ ಬೆಂಗಳೂರು ಗ್ರಾಮಂತರ ಜಿಲ್ಲೆಯ ದೇವನಹಳ್ಳಿ ಕ್ಷೇತ್ರದ ರಾಜಘಟ್ಟ ಗ್ರಾಮದಲ್ಲಿ ಕೆಲವು ಪುರಾವೆಗಳು ದೊರಕಿದ್ದು ಅವುಗಳನ್ನು ಪುರಾತತ್ವ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ಜೊತೆಗೂಡಿ ಸಂಶೋಧನೆ ನಡೆಸುತ್ತಿದ್ದಾರೆ. ಇತ್ತೀಚಿಗೆ 15 ದಿನದಗಳ ಹಿಂದೆ ಅಲ್ಲಿ ಒಂದು ಕಾರ್ಯಕ್ರಮವನ್ನು ಆಯೋಜಿಸಿ ಅಲ್ಲಿ ಬೌದ್ಧ ಧರ್ಮದ ಗುರುಪೀಠ, ಪ್ರಾಥನೆಯ ಮಂದಿರದ ಅನೇಕ ಪುರಾತನ ಅವಶೇಷತೆಗಳನ್ನು ನೋಡಿದ್ದೇವೆ.

ಇದು ದಕ್ಷಿಣ ಭಾರತದಲ್ಲಿಯೇ ಅತಿ ದೊಡ್ಡ ಸ್ಥಳ ಅಂತ ಗುರುತಿಸಲ್ಪಟ್ಟಿದೆ ಅದನ್ನು ಸಂಶೋಧನಾ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯ ನೇತ್ರತ್ವದಲ್ಲಿ ಕಾರ್ಯರೂಪಕ್ಕೆ ತಂದಿದ್ದಾರೆ. ಇದರ ಮುಖಾಂತರ ಮತ್ತೆ ದಕ್ಷಿಣ ಭಾರತದಲ್ಲಿ ನಾಲ್ಕು-ಐದನೇ ಶತಮಾನದಲ್ಲಿ ಇದ್ದ ಒಂದು ಗುರುತುಗಳನ್ನು ಪುನರ್ಜೀವನಗೊಳಿಸಿ, ಈ ಧರ್ಮದ ಸಂದೇಶವನ್ನು ಭಾರತದ ಉದ್ದಕ್ಕೂ ಜಗತ್ತಿಗೂ ತಲುಪಿಸುವ ಚಿಂತನೆಯನ್ನು ಕರ್ನಾಟಕ ಸರ್ಕಾರ, ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಹಾಗೂ ನಾವೆಲ್ಲಾರೂ ಚಿಂತನೆ ಮಾಡುತ್ತಿದ್ದೇವೆ.

ನಾವು ಪಠ್ಯಪುಸ್ತಕಗಳಲ್ಲಿ ಓದುವ ಕಾಲದಲ್ಲಿ ಬುದ್ಧ, ಬಸವಣ್ಣನವರ ಜೈನ ಧರ್ಮ ಇವೆಲ್ಲವನ್ನೂ ಓದಿದ್ದೇವೆ ಜೈನ ಧರ್ಮವೂ ಅತಿ ಶಾಂತಿ, ತಾಳ್ಮೆ, ಸಹಿಷ್ಣತೆ, ಮಾನವತಾವಾದವನ್ನು ಸಾರಿದ ಮಹಾನ್ ಧರ್ಮ ಬೌದ್ಧ ಧರ್ಮದಲ್ಲೂ ಅದೇ ರೀತಿ, ಅಶೋಕ ಚಕ್ರವರ್ತಿಯವರು ಕಳಿಂಗ ಯುದ್ಧದ ರಕ್ತಪಾತ ನೋಡಿ ಪಶ್ಚಾತ್ತಾಪಗೊಂಡು ದೀಕ್ಷೆ ಪಡೆದು, ಬೌದ್ಧ ಧರ್ಮಕ್ಕೆ ಸೇರಿ, ಶ್ರೀಲಂಕಾ, ಇಂಡೋನೇಷ್ಯಾ ಮುಂತಾದ ಪೂರ್ವ ರಾಷ್ಟ್ರಗಳಿಗೆ ಪ್ರಚಾರಕ್ಕಾಗಿ ತನ್ನ ಮಕ್ಕಳನ್ನು, ಸಹೋದರಿಯನ್ನು ಕಳುಹಿಸಿದ ವಿಷಯವನ್ನು ಪುಸ್ತಕಗಳಲ್ಲಿ ಓದಿದ್ದೇವೆ.

ಅಂದರೆ ಈ ಧರ್ಮ ಜಗತ್ತಿಗೆ ಶ್ರೇಷ್ಠವಾದ ಮಾನವತಾವಾದವನ್ನು ಸಾರಿದ ಧರ್ಮ ಇಂದು ಬಂದಂತಹ ಧರ್ಮಗಳಿಗೆ ಪೂರ್ವ ಧರ್ಮ ವಾಗಿದೆಕರ್ನಾಟಕದಲ್ಲಿ 12ನೇ ಶತಮಾನದಲ್ಲಿ ಬಸವಣ್ಣನವರು ಮಾಡಿದ ಕ್ರಾಂತಿಯನ್ನು ನೋಡಿದಾಗ, ಇವತ್ತಿಗೂ ಅದು ಸರಿಯಾದ ರೀತಿಯಲ್ಲಿ ಪ್ರಚಾರವಾಗಿದ್ದರೆ, ಜಗತ್ತಿನ ಮಾನವತಾವಾದ ಕ್ರಾಂತಿಕಾರರಲ್ಲಿ ಬಸವಣ್ಣನವರು ಶ್ರೇಷ್ಠ. ಅವರ ಅನುಭವ ಮಂಟಪದ ರೀತಿಯಲ್ಲಿ ಇವತ್ತು ನಮ್ಮ ಪಾರ್ಲಿಮೆಂಟ್ (ಸಂಸತ್ತು) ನಡೆಯುತ್ತಿದೆ ಅವರ ಮಾರ್ಗದರ್ಶನದಲ್ಲಿ ಮುಂದುವರೆಯುತ್ತಿದೆ. ನಾನು ವೈಯಕ್ತಿಕವಾಗಿ ಕೂಡ ಬೌದ್ಧ ಧರ್ಮದ ಬಗ್ಗೆ ಮಧ್ಯಮ ಶಾಲೆಯ ಕಾಲದಿಂದಲೂ ಆಸಕ್ತಿ ಹೊಂದಿದ್ದೇನೆ ಅದರ ಎಂಟು ದಾರಿಗಳು, ಮಹಾತ್ಮ ಗಾಂಧೀಜಿಯವರ ಸಪ್ತವ್ರತ , ಜೀವನದ ಮಾರ್ಗ — ಎಲ್ಲವೂ ನನಗೆ ಪ್ರೇರಣೆಯಾಗಿವೆ.

ನಾನು ವಕೀಲನಾಗಿದ್ದಾಗ ಬೆಂಗಳೂರಿನ ಗಾಂಧಿಬಜಾರಿನ ಮಹಾಬೋಧಿ ಸೊಸೈಟಿಗೆ ಪ್ರತಿ ವಾರಕ್ಕೊಮ್ಮೆ ಹೋಗಿ ಅರ್ಧಗಂಟೆ ಕುಳಿತುಕೊಳ್ಳುತ್ತಿದ್ದೆ. ಅಲ್ಲಿ ಶಾಂತಿ, ಒಳ್ಳೆ ಮಾತು, ಮಾರ್ಗದರ್ಶನ ದೊರಕುತ್ತಿತ್ತು. ಟಿಬೆಟ್ ನ ಮಹಾಗುರು ದಲೈ ಲಾಮಾ ಅವರ 90ನೇ ಜನ್ಮದಿನ ಆಚರಣೆಯಲ್ಲಿ, ಈ ಕಾರ್ಯಕ್ರಮ ಆಯೋಜಿಸಿರುವುದು ಸಂತಸಕರವಾಗಿದ್ದು ಚಿತ್ರದುರ್ಗದ ನಿಜಲಿಂಗಪ್ಪನವರ ಜನ್ಮಸ್ಥಳದಲ್ಲಿ ಈ ಕಾರ್ಯಕ್ರಮ ಆಯೋಜನೆ ನಡೆಸಿರುವುದು ಸಂತೋಷಕರವಾಗಿದೆ. ಈ ಧರ್ಮ ಉಳಿಯಬೇಕು, ಬೆಳೆಯಬೇಕು — ಈ ಧರ್ಮ ಮಾನವತಾವಾದವನ್ನು ಸಾರಿದೆ ಇದಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ ಎಂದರು.

ಈ ಸಂದರ್ಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರಾದ ಎಂಬಿ.ಪಾಟೇಲ್, ಕಾರ್ಮಿಕ ಸಚಿವ ಸಂತೋಷ್ ಎಸ್. ಲಾಡ್, ಯೋಜನೆ ಮತ್ತು ಅಂಕಿಅಂಶ ಸಚಿವ ಡಿ. ಸುಧಾಕರ್, ಚಿತ್ರದುರ್ಗ ಮಠದ ಮಾದಾರ ಚನ್ನಯ್ಯ ಸ್ವಾಮೀಜಿ, ನಿರಂಜನಾನಂದ ಪುರಿ ಸ್ವಾಮೀಜಿ,ಸಿದ್ದಾರೂಡಾ ಸ್ವಾಮೀಜಿ ,ಪ್ರಸನ್ನಾಂದಪುರಿ ಸ್ವಾಮೀಜಿ ,ವಚನಾಂದ ಸ್ವಾಮೀಜಿ,ಮಾಜಿ ಲೋಕಸಭಾ ಸದಸ್ಯ ಬಿ.ಎನ್. ಚಂದ್ರಪ್ಪ ,ಶಾಸಕರಾದ ರಘು ಮೂರ್ತಿ,ವೀರೇಂದ್ರ ಪಪ್ಪಿ, ಆಧಿಜಾಂಭವ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್ .ಮಂಜುನಾಥ್, ಬಹುಜನ ಸಮಾಜದ ಅಧ್ಯಕ್ಷರಾದ ಮಾರಸಂದ್ರ ಮುನಿಯಪ್ಪ, ಬದ್ಧ ಧರ್ಮದ ಅನುಯಾಯಿಗಳು ಮುಖಂಡರು ಉಪಸ್ಥಿತರಿದ್ದರು.

## ಸರ್ಕಾರದ ಸಹಕಾರದ ಜೊತೆಗೆ ದಾನಿಗಳ ಸಹಕಾರವೂ ಮುಖ್ಯ



ಶಾಲಾ ಮಕ್ಕಳಿಗೆ ನೋಟ್ ಪುಸ್ತಕ, ಲೇಖನಿ, ಸಮವಸ್ತ್ರ, ಕ್ರೀಡಾ ಸಾಮಗ್ರಿಗಳ ವಿತರಣೆ

ಬೆಂಗಳೂರು: ಸರ್ಕಾರಿ ಶಾಲೆಗಳ ಅಭಿವೃದ್ಧಿಯಲ್ಲಿ ಸರ್ಕಾರದ ಸಹಕಾರದ ಜೊತೆಗೆ ದಾನಿಗಳ ಸಹಕಾರವೂ ಮುಖ್ಯವಾಗಿದೆ ಎಂದು ಮುಖ್ಯಶಿಕ್ಷಕಿ ಲಕ್ಷ್ಮೀ ತಿಳಿಸಿದರು. ಬೆಂಗಳೂರಿನ ಮಾಗಡಿ ರಸ್ತೆಯಲ್ಲಿರುವ ಕೋಡಿಗೆಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಬೆಂಗಳೂರಿನ ಸ್ಪೂರ್ತಿ ಚಾರಿಟಬಲ್ ಟ್ರಸ್ಟ್ ವತಿಯಿಂದ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಗಳು, ಲೇಖನಿ ಸಾಮಾಗ್ರಿಗಳು, ಶಾಲಾ ಮಕ್ಕಳಿಗೆ ಸಮವಸ್ತ್ರ ಹಾಗು ಕ್ರೀಡಾ ಸಾಮಾಗ್ರಿಗಳನ್ನು ವಿತರಿಸಿ ಮಾತನಾಡಿದರು.

ಸ್ಪೂರ್ತಿ ಚಾರಿಟಬಲ್ ಟ್ರಸ್ಟ್ ನವರು ಉಚಿತವಾಗಿ ಸುಮಾರು ಹನ್ನೆರಡು ವರುಷಗಳಿಂದ ಸಮಾಜದ ಏಳಿಗೆಗೆ ಸಹಾಯ ಅಗಲೆಂದು ಸೇವೆ ಮಾಡಿಕೊಂಡು ಬರುತ್ತಿದ್ದಾರೆ. ಈ ಬಾರಿ ವಿದ್ಯಾ ಸ್ಪೂರ್ತಿ ಯೋಜನೆಯ ಭಾಗವಾಗಿ ನಮ್ಮ ಶಾಲೆಯ 126 ಮಕ್ಕಳಿಗೆ ಸುಮಾರು 500 ನೋಟ್ ಬುಕ್ ಗಳು, ಲೇಖನಿ ಸಾಮಾಗ್ರಿಗಳು, ಶಾಲಾ ಮಕ್ಕಳಿಗೆ ಸಮವಸ್ತ್ರ ಹಾಗು ಕ್ರೀಡಾ ಸಾಮಾಗ್ರಿಗಳನ್ನು ನೀಡಿದ್ದಾರೆ ಎಂದರು. ಈ ಟ್ರಸ್ಟ್ ನಲ್ಲಿ 33 ಜನ ಸದಸ್ಯರಿದ್ದು ಬೆಂಗಳೂರಿನ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡಿಕೊಂಡು ಸಮಾಜದ ಏಳಿಗೆಗೆ ನಿರಾಶ್ರಿತರಿಗೆ, ಬಡ ಮಕ್ಕಳಿಗೆ, ಅನಾಥಶ್ರಮಗಳಿಗೆ, ಅಂಗವಿಕಲರಿಗೆ ಹಾಗು ವೃದ್ದಾಶ್ರಮಗಳಿಗೆ ಸಹಾಯ ಮಾಡಿಕೊಂಡು ಬಂದಿರುವ ಈ ಕಾರ್ಯವನ್ನು ಪ್ರತಿಯೊಬ್ಬರು ಶ್ಲಾಘಿಸಬೇಕಿದೆ ಎಂದರು. ಈ ಸಂದರ್ಭದಲ್ಲಿ ಟ್ರಸ್ಟ್ ನ ಪದಾಧಿಕಾರಿಗಳು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# 28 ವರ್ಷಗಳ ಶಿಕ್ಷಣ ಸೇವೆಗೆ ಗೌರವ – ಜಿ.ವಿ. ಕುಮಾರ್ ಮೆಸ್ಟ್ರಿಗೆ ಸನ್ಮಾನ



## ಗ್ರಾಮಸ್ಥರು, ಹಳೆಯ ವಿದ್ಯಾರ್ಥಿಗಳು, ಶಿಕ್ಷಕರಿಂದ ಹೃದಯಸ್ಪರ್ಶಿ ಕಾರ್ಯಕ್ರಮ

ನೆಲಮಂಗಲ: ರೈಲ್ವೆಗೊಲ್ಲಹಳ್ಳಿ ಗ್ರಾಮದ ಹೆಸರಾಂತ ನಿವೃತ್ತ ಶಿಕ್ಷಕ ಶ್ರೀ ಜಿ.ವಿ. ಕುಮಾರ್ ಅವರ 28 ವರ್ಷಗಳ ನಿರಂತರ ಶಿಕ್ಷಣ ಸೇವೆಯನ್ನು ಸ್ಮರಿಸಿ, ಭವ್ಯ ಅಭಿನಂದನಾ ಹಾಗೂ ಗೌರವ ಸನ್ಮಾನ ಸಮಾರಂಭ ಜರುಗಿತು. ಗ್ರಾಮದ ಎಲ್ಲ ಶಿಕ್ಷಕರು, ಹಳೆಯ ವಿದ್ಯಾರ್ಥಿಗಳು, ಅಭಿಮಾನಿಗಳು ಹಾಗೂ ಗಣ್ಯರು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

### ವಿದ್ಯಾರ್ಥಿ ಬದುಕಿಗೆ ಬೆಳಕಾದ ಗುರು

ಜಿ.ವಿ. ಕುಮಾರ್ ಅವರು 28 ವರ್ಷಗಳ ಕಾಲ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಬೋಧನಾ ಸೇವೆ ಸಲ್ಲಿಸಿದರು. ಶಿಸ್ತು, ಸಮಯಪಾಲನೆ, ನೈತಿಕ ಮೌಲ್ಯಗಳು ಮತ್ತು ಮಕ್ಕಳ ಪ್ರತಿಭೆ ಬೆಳೆಸುವ ಬದ್ಧತೆಯಿಂದ ಅವರು ವಿದ್ಯಾರ್ಥಿಗಳ ಹೃದಯದಲ್ಲಿ ಅಚ್ಚಳಿಯದ ಸ್ಥಾನ ಗಳಿಸಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಅನೇಕ ವಿದ್ಯಾರ್ಥಿಗಳು ವೈದ್ಯರು, ಇಂಜಿನಿಯರ್‌ಗಳು, ಸರ್ಕಾರಿ ನೌಕರರು ಹಾಗೂ ಯಶಸ್ವಿ ಉದ್ಯಮಿಗಳಾಗಿ ಬೆಳೆದಿದ್ದಾರೆ.

- 28 ವರ್ಷಗಳ ನಿರಂತರ ಬೋಧನಾ ಸೇವೆ
- ಸಾವಿರಾರು ವಿದ್ಯಾರ್ಥಿಗಳ ಬದುಕು ರೂಪಿಸಿದ ಮಾರ್ಗದರ್ಶಕ
- ಗ್ರಾಮೀಣ ಶಿಕ್ಷಣದ ಶಕ್ತಿಕೇಂದ್ರ ಎಂದು ಗಣ್ಯರಿಂದ ಪ್ರಶಂಸೆ
- ಹಳೆಯ ವಿದ್ಯಾರ್ಥಿಗಳ ಕಣ್ಣೀರಿನ ಕೃತಜ್ಞತೆ
- ಭಾವನಾತ್ಮಕ ವಾತಾವರಣದಲ್ಲಿ ಯಶಸ್ವಿ ಸಮಾರಂಭ

### ಗಣ್ಯರಿಂದ ಮೆಚ್ಚುಗೆ

ಸಮಾರಂಭದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯ ಇ.ಕೆ. ಕೃಷ್ಣಪ್ಪ , ಮಾಜಿ ಶಾಸಕ ಡಾ. ಶ್ರೀನಿವಾಸ ಮೂರ್ತಿ, ಹಾಗೂ ಬೆಮಲ್ ಕಾಂತರಾಜ್ ಉಪಸ್ಥಿತರಿದ್ದು , ಶಿಕ್ಷಕರ ಸೇವೆಯನ್ನು ಹೃದಯಪೂರ್ವಕವಾಗಿ ಕೊಂಡಾಡಿದರು. ಈ ಸಂದರ್ಭದಲ್ಲಿ ಮಾಜಿ ಪರಿಷತ್ ಸದಸ್ಯ ಇ.ಕೆ. ಕೃಷ್ಣಪ್ಪ ಮಾತನಾಡಿ ಗ್ರಾಮೀಣ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಅವರ ಬದುಕು ರೂಪಿಸುವ ಕೆಲಸ ಜಿ. ವಿ.ಕುಮಾರ್ ಅವರಂತಹ ಗುರುಗಳು ಮಾತ್ರ ಮಾಡಬಲ್ಲರು ಎಂದರು. ಹಾಗೂ ಮಾಜಿ ಶಾಸಕ ಡಾ. ಶ್ರೀನಿವಾಸ ಮೂರ್ತಿ ಮಾತನಾಡಿ ಶಿಕ್ಷಕರು ಕೇವಲ ಪಾಠ ಹೇಳುವುದಲ್ಲ, ಜೀವನ ಮೌಲ್ಯಗಳನ್ನು ಕಲಿಸುವ ಮಹಾನ್ ಸಾಧಕರು ಎಂದರು.

### ಕಣ್ಣೀರಿನ ನೆನಪುಗಳು

ಹಳೆಯ ವಿದ್ಯಾರ್ಥಿಗಳು ಹಾಗೂ ಅಭಿಮಾನಿಗಳು ಹೂವಿನ ಹಾರ, ಸ್ಮರಣಿಕೆ, ಹಾಗೂ ಹೃದಯಸ್ಪರ್ಶಿ ಮಾತುಗಳಿಂದ ಗುರುಗಳಿಗೆ ಗೌರವ ಸಲ್ಲಿಸಿದರು. ನವೀನ್, ಪುನೀತ್, ಕಿಶೋರ್, ಚಂದನ್ ಸೇರಿದಂತೆ ಅನೇಕರು ತಮ್ಮ ಬಾಲ್ಯದ ನೆನಪುಗಳನ್ನು ಹಂಚಿಕೊಂಡು, "ಗುರುಗಳ ಮಾರ್ಗದರ್ಶನವೇ ನಮ್ಮ ಬದುಕಿನ ಆಧಾರ" ಎಂದು ಕೃತಜ್ಞತೆ ವ್ಯಕ್ತಪಡಿಸಿದರು. ಗುರುಗಳ ಪಾಠ ಕೇವಲ ಪುಸ್ತಕದ ಜ್ಞಾನವಲ್ಲ, ಬದುಕನ್ನು ಹೇಗೆ ನಯವಾಗಿ ನಡೆಸಬೇಕು ಎಂಬ ಪಾಠವಿತ್ತು ಎಂದು ವಿದ್ಯಾರ್ಥಿಗಳು ತಿಳಿಸಿದರು.

# ಕಾಂಗ್ರೆಸ್ ಸರ್ಕಾರ ದ್ವೇಷ ರಾಜಕೀಯ ಮಾಡುತ್ತಿದೆ: ಜಗದೀಶ್ ಚೌಧರಿ ಆರೋಪ

## ಪೊಲೀಸ್ ಇಲಾಖೆಯನ್ನು ಕಾಂಗ್ರೆಸ್ ಪಕ್ಷ ದುರ್ಬಳಕೆ ಮಾಡಿಕೊಳ್ಳುತ್ತಿದೆ: ಇದೊಂದು ವ್ಯವಸ್ಥಿತ ಪಿತೂರಿ

ನೆಲಮಂಗಲ: ರಾಜ್ಯ ಕಾಂಗ್ರೆಸ್ ಸರ್ಕಾರ ರಾಜಕೀಯ ದುರುದ್ದೇಶದಿಂದ ಚಿಕ್ಕಬಳ್ಳಾಪುರ ಸಂಸದ ಡಾ.ಕೆ. ಸುಧಾಕರ್ ಅವರ ವಿರುದ್ಧ ಸುಳ್ಳು ಎಫ್‌ಐಆರ್ ದಾಖಲಿಸಿದೆ ಎಂದು ಬಿಜೆಪಿ ತಾಲೂಕು ಅಧ್ಯಕ್ಷ ಜಗದೀಶ್ ಚೌಧರಿ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಚಿಕ್ಕಬಳ್ಳಾಪುರದಲ್ಲಿ ಬಾಬು ಎಂಬಾತ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಆತ ಬರೆದ ಚೀಟಿಯಲ್ಲಿ ಸಂಸದ ಡಾ.ಕೆ. ಸುಧಾಕರ್ ಅವರ ಹೆಸರು ನೇರವಾಗಿ ಉಲ್ಲೇಖಿಸಲಿಲ್ಲ. ಹಣ ಪಡೆದು ಕೆಲಸ ಕೊಡಲು ಇಬ್ಬರು ವ್ಯಕ್ತಿಗಳು ಸಂಸದರ ಹೆಸರನ್ನು ಬಳಸಿಕೊಂಡಿರಬಹುದು. ಸಂಸದರು ಈಗಾಗಲೇ "ನನಗೂ ಇದಕ್ಕೂ ಸಂಬಂಧವಿಲ್ಲ" ಎಂದು ಸ್ಪಷ್ಟನೆ ನೀಡಿದರೂ, ರಾಜ್ಯ ಸರ್ಕಾರ ಮತ್ತು ಪೊಲೀಸ್ ಇಲಾಖೆ ಪಾರದರ್ಶಕ ತನಿಖೆ ನಡೆಸದೇ ಉದ್ದೇಶಪೂರ್ವಕವಾಗಿ ರಾಜಕೀಯ ದ್ವೇಷದಿಂದ ಸಂಸದರ ವಿರುದ್ಧ ಪ್ರಕರಣ ದಾಖಲಿಸಿದೆ ಎಂದು ಅವರು ಆರೋಪಿಸಿದರು. ಪೊಲೀಸ್ ಅಧಿಕಾರಿಗಳು ಆಡಳಿತ ಪಕ್ಷದ ಕೈಗೊಂಬೆಗಳಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಜಗದೀಶ್ ಚೌಧರಿ ಟೀಕಿಸಿದರು. "ಸಂಸದರು ಯಾವುದೇ ತಪ್ಪು ಮಾಡದೇ ಇದ್ದರೂ, ಅವರನ್ನು ರಾಜಕೀಯವಾಗಿ ಕಟ್ಟು ಹಾಕುವ ಕೆಲಸ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ" ಎಂದರು.

**ಪೊಲೀಸರ ದುರ್ಬಳಕೆ ಆರೋಪ:** ಕಾಂಗ್ರೆಸ್ ಸರ್ಕಾರದಲ್ಲಿ ಇತ್ತೀಚೆಗೆ ಎನ್‌ಡಿಎ ಮೈತ್ರಿ ಕೂಟದ ನಾಯಕರ ವಿರುದ್ಧ ಹೆಚ್ಚಿನ ಪ್ರಕರಣಗಳು ದಾಖಲೆಯಾಗುತ್ತಿವೆ. ಇದು ಪ್ರತೀಕಾರದ ರಾಜಕೀಯ. ರಾಜ್ಯ ಸರ್ಕಾರ ಪೊಲೀಸ್ ಇಲಾಖೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ" ಎಂದರು. ಅವರು ಕೂಡಲೇ ಸಂಸದರ ವಿರುದ್ಧ ದಾಖಲಿಸಿರುವ ಪ್ರಕರಣವನ್ನು ನ್ಯಾಯಸಮ್ಮತವಾಗಿ ತನಿಖೆ ಮಾಡಿ, ಉದ್ದೇಶಪೂರ್ವಕವಾಗಿ ಸೇರಿಸಿರುವ ಡಾ.ಕೆ. ಸುಧಾಕರ್ ಅವರ ಹೆಸರನ್ನು ಕೈ ಬಿಡಬೇಕೆಂದು ಒತ್ತಾಯಿಸಿದರು. ಇಲ್ಲದಿದ್ದರೆ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಪ್ರತಿಯೊಂದು ವಿಧಾನಸಭಾ ಕ್ಷೇತ್ರದಲ್ಲೂ ಬೃಹತ್ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

**ಬಿಜೆಪಿ ನಾಯಕರ ಬೆಂಬಲ:** ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಮಕೃಷ್ಣಪ್ಪ ಮಾತನಾಡಿ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಧ್ವನಿ ಎತ್ತಿದ ನಾಯಕರ ಮೇಲೆ ಸುಳ್ಳು ಪ್ರಕರಣ ದಾಖಲಿಸುತ್ತಿದ್ದಾರೆ. ಇತ್ತೀಚೆಗೆ ಗುತ್ತಿಗೆದಾರನೊಬ್ಬ ಕಾಂಗ್ರೆಸ್ ನಾಯಕರ ಹೆಸರನ್ನು ಬರೆದು ಆತ್ಮಹತ್ಯೆ ಮಾಡಿಕೊಂಡರೂ ಕ್ರಮ ಕೈಗೊಳ್ಳಲಿಲ್ಲ. ಆದರೆ ಸಂಸದರಿಗೆ ಪರಿಚಯವಿಲ್ಲದ ವ್ಯಕ್ತಿ ಅವರ ಹೆಸರನ್ನು ಬಳಸಿಕೊಂಡು ಆತ್ಮಹತ್ಯೆ ಮಾಡಿಕೊಂಡಾಗ, ತಕ್ಷಣ ಎಫ್‌ಐಆರ್ ದಾಖಲಿಸುವುದು ನ್ಯಾಯವಲ್ಲ" ಎಂದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಎಂ.ವಿ. ನಾಗರಾಜು, ಬಿಜೆಪಿ ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷ ಕೆ.ಪಿ. ಬೃಂಗೇಶ್, ತಾಲೂಕು ಪ್ರಧಾನ ಕಾರ್ಯದರ್ಶಿ ರಂಗನಾಥ್ ಬಾಬು, ನಗರ ಅಧ್ಯಕ್ಷ ಕೇಶವಮೂರ್ತಿ, ವಿಶ್ವೇಶ್ವರಪುರ ಶಕ್ತಿ ಕೇಂದ್ರ ಅಧ್ಯಕ್ಷ ಸಿ. ಅಶ್ವಥ್, ನಗರಸಭೆ ಹೆಚ್ಚುವರಿ ಸದಸ್ಯ ಅಂಜನಮೂರ್ತಿ, ಮುನಿರಾಜು, ಕೃತ ಕೃಪಾನಂದ್, ಮುಖಂಡ ರಘು, ಅರುಣ್ ಗೌಡ, ಪ್ರಕಾಶ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

- ಸಂಸದ ಡಾ.ಕೆ. ಸುಧಾಕರ್ ವಿರುದ್ಧದ ಪ್ರಕರಣ ಸುಳ್ಳು – ಜಗದೀಶ್ ಚೌಧರಿ
- ಆತ್ಮಹತ್ಯೆ ಚೀಟಿಯಲ್ಲಿ ಸಂಸದರ ಹೆಸರು ನೇರ ಉಲ್ಲೇಖವಿಲ್ಲ
- ಕಾಂಗ್ರೆಸ್ ಸರ್ಕಾರದಿಂದ ದ್ವೇಷದ ರಾಜಕೀಯ
- ಎನ್‌ಡಿಎ ನಾಯಕರ ವಿರುದ್ಧ ಪ್ರಕರಣಗಳ ಸಂಖ್ಯೆ ಹೆಚ್ಚಳ
- ಪ್ರಕರಣ ಹಿಂಪಡೆಯದಿದ್ದರೆ ಬೃಹತ್ ಪ್ರತಿಭಟನೆಯ ಎಚ್ಚರಿಕೆ



# ಬೆಂಗಳೂರು ಸಂಪರ್ಕ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಿಸಲಿದೆ: ಸಿಎಂ

ಪುಟ 1ರಿಂದ

ಮೆಟ್ರೋ 2ಎ ಮತ್ತು 2ಬಿ ಹಂತದಲ್ಲಿ Outer ring road ಮತ್ತು ಏರ್ಪೋರ್ಟ್ ಸಂಪರ್ಕಿಸುವ 58 ಕಿ. ಮೀ ಉದ್ದದ ರೂ.15,131 ಕೋಟಿ ವೆಚ್ಚದ ಮಾರ್ಗ 2027ರ ಡಿಸೆಂಬರ್‌ನಲ್ಲಿ ಪೂರ್ಣಗೊಳ್ಳಲಿದೆ. ಈ ಮಾರ್ಗ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಬೆಂಗಳೂರು ನಗರವನ್ನು ಜೋಡಿಸಲಿದೆ. ಹಂತ-3ರ 44.65 ಕಿ.ಮೀ ಉದ್ದದ ರೂ.15,611 ಕೋಟಿ ಹೂಡಿಕೆಯ ಮಾರ್ಗ ಬೆಂಗಳೂರು ನಗರದ ಸಂಪರ್ಕ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಿಸಲಿದೆ. ಇದರ ಸಿವಿಲ್ ಕಾಮಗಾರಿಗಳು ಸಧ್ಯದಲ್ಲಿಯೇ ಆರಂಭವಾಗಲಿದೆ.

ಮೆಟ್ರೋ ಹಂತ 4ರಲ್ಲಿ 53 ಕಿ.ಮೀ ಉದ್ದದ ಡಬಲ್ ಡೆಕ್ಕರ್-ಕಂ-ಮೆಟ್ರೋ ಮಾರ್ಗ ನಿರ್ಮಾಣದ ಕಾರ್ಯಸಾಧ್ಯತಾ ವರದಿ (Feasibility Report) ಸಿದ್ಧಪಡಿಸುವ ಕಾರ್ಯ ಪ್ರಗತಿಯಲ್ಲಿದೆ. 2030ರ ವೇಳೆಗೆ ಬೆಂಗಳೂರು ನಗರದಲ್ಲಿ 220 ಕಿ.ಮೀ ಉದ್ದದ ಮೆಟ್ರೋ ಮಾರ್ಗ ಪೂರ್ಣಗೊಳಿಸಿ, 30 ಲಕ್ಷ ಜನರು ಪ್ರಯಾಣಿಸಲು ಮೂಲಸೌಕರ್ಯ ಕಲ್ಪಿಸುವುದು ನಮ್ಮ ಬದ್ಧತೆಯಾಗಿದೆ.

ಮೆಟ್ರೋ ನಿಲ್ದಾಣಗಳ ನಿರ್ಮಾಣದಲ್ಲಿ ಇನ್ಫೋಸಿಸ್ ಫೌಂಡೇಶನ್, ಬಯೋಕಾನ್ ಮತ್ತು ಡೆಲ್ಟಾ ಎಲೆಕ್ಟ್ರಾನಿಕ್ಸ್ ನಂತಹ ಖಾಸಗಿ ಸಂಸ್ಥೆಗಳು ಕೈ ಜೋಡಿಸಿವೆ. ಬೆಂಗಳೂರಿನ ಅಭಿವೃದ್ಧಿ ಕಾರ್ಯಗಳಲ್ಲಿ ಖಾಸಗಿ ಮತ್ತು ಸಾರ್ವಜನಿಕ ಸಹಭಾಗಿತ್ವ ಮುಂದಿನ ದಿನಗಳಲ್ಲಿ ಇನ್ನಷ್ಟು ಸದೃಢಗೊಳ್ಳುವ ವಿಶ್ವಾಸ ನನಗಿದೆ.

ನಮ್ಮ ರಾಜ್ಯವು ದೇಶದ ಐಟಿ ರಫ್ತಿನಲ್ಲಿ ಶೇ.35-40 ರಷ್ಟು ಕೊಡುಗೆ ಕೊಡುತ್ತಿದೆ. ಇದರಲ್ಲಿ ಬೆಂಗಳೂರಿನ ಪಾಲು ದೊಡ್ಡದು. ಎಲೆಕ್ಟ್ರಾನಿಕ್ಸ್ ಮತ್ತು ಸಂಶೋಧನೆ ಹಾಗೂ ಅಭಿವೃದ್ಧಿಯ ರಫ್ತಿನಲ್ಲಿ ಶೇ.40 ಕ್ಕೂ ಹೆಚ್ಚಿನ ಪಾಲು ರಾಜ್ಯದ್ದಾಗಿದೆ. ಈ ಹಿನ್ನೆಲೆಯಲ್ಲಿ ನಮ್ಮ ಸರ್ಕಾರವು 1.35 ಲಕ್ಷ ಕೋಟಿ ರೂಗಳಿಗೂ ಅಧಿಕ ಮೊತ್ತದ ಯೋಜನೆಗಳನ್ನು ರೂಪಿಸಿ ಸಂಪನ್ಮೂಲಗಳನ್ನು ವಿನಿಯೋಗಿಸಿ ಬೆಂಗಳೂರನ್ನು ಮಾದರಿ ನಗರವನ್ನಾಗಿಸಲು ಪ್ರಯತ್ನ ಮಾಡುತ್ತಿದ್ದೇವೆ. ಈಗಾಗಲೇ ಅನೇಕ ಯೋಜನೆಗಳು ಕಾರ್ಯಗತಗೊಳ್ಳುತ್ತಿವೆ. ದೇಶದ ಆರ್ಥಿಕತೆಗೆ ಬೃಹತ್ ಕೊಡುಗೆ ಕೊಡುತ್ತಿರುವ ಬೆಂಗಳೂರಿನ ಅಭಿವೃದ್ಧಿಗೆ ಕೇಂದ್ರ ಸರ್ಕಾರವೂ ಸಹ ಕೈ ಜೋಡಿಸಬೇಕೆಂದು ವಿನಂತಿಸುತ್ತೇನೆ.

# ಮಂಗಳವಾರ ನೆಲಮಂಗಲ ನಗರದಲ್ಲಿ ಪತ್ರಿಕಾ ದಿನಾಚರಣೆ

ನೆಲಮಂಗಲ: ಅ.12ರಂದು ಮಂಗಳವಾರ ಬೆಳಗ್ಗೆ 11ಗಂಟೆಗೆ ನಗರದ ಪವಾಡ ಶ್ರೀ ಬಸವಣ್ಣ ದೇವರ ಮಠದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಬಸವಣ್ಣ ಮಠದ ಶ್ರೀ ಸಿದ್ದಲಿಂಗಸ್ವಾಮೀಜಿ ವಹಿಸಲಿದ್ದು ಶಾಸಕ ಎನ್.ಶ್ರೀನಿವಾಸ್ ಉದ್ಘಾಟಿಸಲಿದ್ದಾರೆ.

ಕಾ ರ್ಯ ಕ್ರ ಮ ದ ಅಧ್ಯಕ್ಷತೆಯನ್ನು ತಾಲೂಕು ಆದ್ಯಕ್ಷ ಬೂದಿಹಾಲ್ ಕಿಟ್ಟಿ ವಹಿಸಲಿದ್ದು ನೆ.ಯೋ.ಪ್ರಾಧಿಕಾರ ಅದ್ಯಕ್ಷ ಎಂ.ನಾರಾಯಣ್‌ಗೌಡ ಹಾಗೂ ನಗರಸಭೆ ಅದ್ಯಕ್ಷ ಎನ್.ಗಣೇಶ್ ನಿಟಕಪೂರ್ವ ಪದಾಧಿಕಾರಿಗಳಿಗೆ ಸನ್ಮಾನ, ಸಂಘದ ಜಿಲ್ಲಾಧ್ಯಕ್ಷ ಜಿ. ಶ್ರೀನಿವಾಸ್ ಹಾಗೂ ಬಮೂಲ್ ನಿರ್ದೇಶಕ ಭವಾನಿ ಶಂಕರ್ ಬೈರೇಗೌಡ್ರು ಪ್ರತಿಭಾ ಪುರಸ್ಕಾರ ನೇರವೇರಿಸಲಿದ್ದಾರೆ.

ಜತೆಗೆ ನಿವೃತ್ತ ಉಪಸಂಪಾದಕ ಉದಯ್‌ಕುಮಾರ್ ಉಪನ್ಯಾಸ ನೀಡಲಿದ್ದಾರೆ ಕಾರ್ಯಕ್ರಮದ ಪ್ರಯುಕ್ತ ಸಂಘದ ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಹಾಗೂ ನಿಕಟಪೂರ್ವ ತಾಲೂಕು ಸಮಿತಿ ಪದಾಧಿಕಾರಿಗಳು ಸೇರಿದಂತೆ ಜಿಲ್ಲೆಗೆ ತಾಲೂಕಿನ ಜಿಲ್ಲಾ ನಿರ್ದೇಶಕರಿಗೆ ಗೌರವ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಪ್ರಧಾನ ಕಾರ್ಯದರ್ಶಿ ವಿಜಯ್ ವೀಳ್ಯದೆಲೆ ಬಾವಿಕೆರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.